# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 33, ಮನೋರಾಯನಪಾಳ್ಯ**

ಸಂಖ್ಯೆ: ಸ.ಅ/ವಾ-33/ಪಿ.ಆರ್/34/2022-23 ದಿನಾಂಕ:-23-08-2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ:-23-08-2022 ರಂದು ವಾರ್ಡ್ ನಂ:33, ಮನೋರಾಯನಪಾಳ್ಯ, ವಾರ್ಡ್ ಸಮಿತಿ ಸಭೆಯ ನಡವಳಿಗಳು.

## :: ಸಭೆಗೆ ಹಾಜರಾಗಿದ್ದವರ ವಿವರಗಳು ::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ. ಅಶೋಕ್ ಹಿಂದಾ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಸೋಮಶೇಖರ್ ನಿಟ್ಟೂರೆ | ಸಹಾಯಕ ಅಭಿಯಂತರರು ವಾಡ್ ನಂ: 33 |
| 3. | ಶ್ರೀ.ಕನಕರಾಜ್ | ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 4. | ಶ್ರೀ.ಪುಟ್ಟಸ್ವಾಮಿ | ಸಹಾಯಕ ಅಭಿಯಂತರರು ಬೆಸ್ಕಾಂ |
| 5. | ಶ್ರೀ. ಕುಮಾರ್ | ಕಿರಿಯ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6. | ಶ್ರೀ. ರಂಗನಾಥ | ಕಂದಾಯ ನಿರೀಕ್ಷಕರು |
| 7. | ಶ್ರೀ. ನಾಗೇಂದ್ರ | ಕಿರಿಯ ಆರೋಗ್ಯ ಪರಿವೀಕ್ಷಕರು |
| 8. | ಶ್ರೀ. ಬಸವರಾಜ್ | ಮಾರ್ಷಲ್ |
| 9. | ಶ್ರೀ. ಮೂರ್ತಿ | ಕಂದಾಯ ಅಧಿಕಾರಿ |
| 10. | ಶ್ರೀ. ಇರ್ಫಾನ್ | ಸಾರ್ವಜನಿಕರು |
| 11. | ಶ್ರೀ. ನದೀಮ್ | ಸಾರ್ವಜನಿಕರು |
| 12. | ಶ್ರೀ. ಜಮೀಲ್ | ಸಾರ್ವಜನಿಕರು |
| 13. | ಶ್ರೀ. ಶಾಕೀರ್ | ಸಾರ್ವಜನಿಕರು |
| 14. | ಶ್ರೀ. ರೂಪೇಶ್ | ಸಾರ್ವಜನಿಕರು |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಯಾದ ಶ್ರೀ. ಅಶೋಕ್ ಹಿಂದಾ ಮತ್ತು ಕಾರ್ಯದರ್ಶಿ, ಸಹಾಯಕ ಅಭಿಯಂತರರಾದ ಶ್ರೀ.ಸೋಮಶೇಖರ್ ನಿಟ್ಟೂರೆ ರವರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ಸಂಖ್ಯೆ-33 ರವರು ಹಿಂದಿನ ಸಭೆಯಲ್ಲಿ ನಡೆದಂತಹ ವಿಷಯಗಳ ಹಾಗೂ ದೂರುಗಳ ಕುರಿತು ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಕೂಲಂಕುಶವಾಗಿ ಚರ್ಚಿಸಲಾಯಿತು.

**ಘನತ್ಯಾಜ್ಯ:**

1. ವಾರ್ಡ್ ವ್ಯಾಪ್ತಿಯಲ್ಲಿನ ಪಿ & ಟಿ ಕಾಲೋನಿಯ ಚೈತನ್ಯ ಆಸ್ಪತ್ರೆ ಬಳಿ ಇರುವ ಕಸವನ್ನು ವಿಲೇವಾರಿ ಮಾಡುವ ಕಾರ್ಯವು ಪ್ರಗತಿಯಲ್ಲಿರುತ್ತದೆ.
2. ವಾರ್ಡ್ ವ್ಯಾಪ್ತಿಯಲ್ಲಿನ ರಹಮತ್ ನಗರದ 5ನೇ ಮುಖ್ಯರಸ್ತೆ, 5ನೇ ಅಡ್ಡರಸ್ತೆಯಲ್ಲಿರುವ ಕಸವನ್ನು ವಿಲೇವಾರಿ ಮಾಡುವ ಕಾರ್ಯವು ಪ್ರಗತಿಯಲ್ಲಿರುತ್ತದೆ.

**ಕಾಮಗಾರಿ ಇಲಾಖೆ:**

1. ವಾರ್ಡ್ ವ್ಯಾಪ್ತಿಯಲ್ಲಿರುವ ರಸ್ತೆ ಪಕ್ಕದ ಮಳೆನೀರು ಚರಂಡಿಗಳಲ್ಲಿ ತುಂಬಿಕೊಂಡಿರುವ ಹೂಳನ್ನ ತೆಗೆಯುವ ಕಾರ್ಯವು ಪ್ರಗತಿಯಲ್ಲಿರುತ್ತದೆ.
2. ವಾರ್ಡ್ ವ್ಯಾಪ್ತಿಯಲ್ಲಿ ಬಿದ್ದಿರುವ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯವು ಪ್ರಗತಿಯಲ್ಲಿರುತ್ತದೆ.

**ಆರೋಗ್ಯ ಇಲಾಖೆ:-**

1. ವಾರ್ಡ್ ವ್ಯಾಪ್ತಿಯ ಬಿ.ಡಿ.ಎ ಕಾಂಪ್ಲೇಕ್ಸ್‌ನಿಂದ ಆರ್.ಟಿ ನಗರ ಮುಖ್ಯರಸ್ತೆಯವರೆಗೆ ರಸ್ತೆಯ ಪಕ್ಕದ ಪಾದಚಾರಿ ಮಾರ್ಗದಲ್ಲಿ ಹೋಟೆಲ್ ಮತ್ತು ಅಂಗಡಿ ಮಾಲೀಕರು ಸಾಮಾಗ್ರಿಗಳನ್ನು ಇಟ್ಟಿರುವ ಜಾಗವನ್ನು ತೆರವುಗೊಳಿಸುವ ಬಗ್ಗೆ ಕ್ರಮವನ್ನು ಕೈಗೊಳ್ಳಲಾಗುತ್ತಿದೆ.

**ದಿನಾಂಕ:-23-08-2022 ರಂದು ನಡೆದ ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು**

**ಘನತ್ಯಾಜ್ಯ:**

1. ವಾರ್ಡ್ ವ್ಯಾಪ್ತಿಯಲ್ಲಿನ ಕಸವನ್ನು ಪ್ರತಿದಿನ ವಿಲೇವಾರಿ ಮಾಡಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರವರಿಗೆ ಸೂಚಿಸಲಾಯಿತು.
2. ಆರ್.ಟಿ ನಗರ ಉದ್ಯಾನವನದ ಅಕ್ಕಪಕ್ಕದಲ್ಲಿ ಬಿದ್ದಿರುವ ಕಸವನ್ನು ವಿಲೇವಾರಿ ಮಾಡಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರವರಿಗೆ ಸೂಚಿಸಲಾಯಿತು.

**ಕಾಮಗಾರಿ ಇಲಾಖೆ:-**

1. ಪಿ. & ಟಿ ಕಾಲೋನಿಯಲ್ಲಿ ಬಿದ್ದಿರುವ ಡೆಬ್ರಿಸ್‌ಅನ್ನು ತೆಗೆಸಲು ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.
2. ರಸ್ತೆ ಪಕ್ಕದಲ್ಲಿರುವ ಫ್ಲೆಕ್ಸ್ ಮತ್ತು ಬ್ಯಾನರ್‌ಗಳನ್ನು ತೆರವುಗೊಳಿಸಲು ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

**ಬಿ.ಡಬ್ಲ್ಯೂ.ಎಸ್.ಎಸ್.ಬಿ:-**

1. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರನ್ನು ಸಮಯಕ್ಕೆ ಸರಿಯಾಗಿ ಸರಬರಾಜು ಮಾಡಲು ಸೂಚಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿ ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 33 ಮನೋರಾಯನಪಾಳ್ಯ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 33 ಮನೋರಾಯನಪಾಳ್ಯ

**ಪ್ರತಿಯನ್ನು:**

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
4. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
5. ಕಛೇರಿ ಕಡತಕ್ಕೆ.